**All India Radio: Bangalore**
**Regional Bulletin In Kannada**
**28.10.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.10.2025 / 2.30 p.m.**
**<><><><>**

ಮುಖ್ಯಾಂಶಗಳು

- ಸರ್ಕಾರಿ ಸ್ಥಳಗಳಲ್ಲಿ ಖಾಸಗಿ ಚಟುವಟಿಕೆಗೆ ಅನುಮತಿ ಕಡ್ಡಾಯ ವಿಚಾರ ; ಸರ್ಕಾರದ ಆದೇಶಕ್ಕೆ ಧಾರವಾಡ ಉಚ್ಚನ್ಯಾಯಾಲಯ ತಡೆ
- ರಾಜ್ಯವನ್ನು ಮಾದಕವ್ಯಸನ ಮುಕ್ತ ಮಾಡುವುದು ಸರ್ಕಾರದ ಗುರಿ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಬೆಂಗಳೂರಿನ ಸುರಂಗ ಮಾರ್ಗ ಕುರಿತಂತೆ ಉಪಮುಖ್ಯಮಂತ್ರಿ ಜೊತೆ ಚರ್ಚಿಸಿದ ಸಂಸದ ತೇಜಸ್ವಿ ಸೂರ್ಯ
- ಮೋಂಥಾ ಚಂಡಮಾರುತ ; ಕರಾವಳಿಯಲ್ಲಿ ವ್ಯಾಪಕ ಮಳೆ, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಮುನ್ಸೂಚನೆ

<><><><>

ರಾಜ್ಯ ಸರ್ಕಾರ ಸಾರ್ವಜನಿಕ ಮತ್ತು ಸರ್ಕಾರಿ ಸ್ವಾಮ್ಯದ ಸ್ಥಳಗಳಲ್ಲಿ ಕಾರ್ಯಕ್ರಮಗಳನ್ನು ನಡೆಸಲು ಅಧಿಕಾರಿಗಳಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯ ಎಂಬ ಆದೇಶಕ್ಕೆ ಉಚ್ಚನ್ಯಾಯಾಲಯದ ಧಾರವಾಡ ಪೀಠ ಮಧ್ಯಂತರ ತಡೆಯಾಜ್ಞೆ ನೀಡಿದೆ. ನ್ಯಾಯಮೂರ್ತಿ ಎಂ. ನಾಗಪ್ರಸನ್ನ ನೇತೃತ್ವದ ಪೀಠವು ಗೃಹ ಇಲಾಖೆ ಮತ್ತು ರಾಜ್ಯ ಸರ್ಕಾರಕ್ಕೆ ನೋಟಿಸ್ ನೀಡಿದೆ. ಸಾರ್ವಜನಿಕ ಸ್ಥಳಗಳು ಮತ್ತು ಸರ್ಕಾರಿ ಸ್ವಾಮ್ಯದ ಆವರಣದಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಷೇಧಿಸುವಂತೆ ಒತ್ತಾಯಿಸಿ ಸಚಿವ ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಪತ್ರದ ಬಳಿಕ, ಸರ್ಕಾರ ಈ ಆದೇಶ ಹೊರಡಿಸಿತ್ತು.

<><><><>

ಮಾದಕ ವ್ಯಸನಮುಕ್ತ ರಾಜ್ಯ ಮಾಡುವುದು ಸರ್ಕಾರದ ಗುರಿಯಾಗಿದ್ದು, ನಿಮ್ಮ ಗುರಿಯು ಅದೇ ಆಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ರಾಜ್ಯ ಪೊಲೀಸ್ ಇಲಾಖೆ ಆಯೋಜಿಸಿದ್ದ ಪೊಲೀಸ್ ಸಿಬ್ಬಂದಿಯ ನೂತನ ಪೀಕ್ ಕ್ಯಾಪ್ ವಿತರಣೆ ಮತ್ತು ಮಾದಕದ್ರವ್ಯ ವಿರೋಧಿ ಕಾರ್ಯಪಡೆ ಉದ್ಘಾಟಿಸಿ, ಸನ್ಮಿತ್ರ ಕಾರ್ಯಯೋಜನೆ ಕೈಪಿಡಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ದಕ್ಷಿಣಕನ್ನಡ ಜಿಲ್ಲೆ ಇಂದು ಶಾಂತವಾಗಿರಲು ಪೊಲೀಸ್ ಅಧಿಕಾರಿಗಳ ಕಾರ್ಯಕ್ಷಮತೆಯೇ ಕಾರಣ ಎಂದು ಮುಖ್ಯಮಂತ್ರಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಪೊಲೀಸ್ ಇಲಾಖೆಯ ದಕ್ಷತೆಯಿಂದ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತಿದ್ದು, ದೇಶದಲ್ಲಿ ಇಂದು ರಾಜ್ಯ ಪೊಲೀಸ್ ಇಲಾಖೆ ಪ್ರಥಮ ಸ್ಥಾನದಲ್ಲಿದೆ ಎಂಬುದು ರಾಜ್ಯದ ಘನತೆ ಹೆಚ್ಚಿಸಿದೆ ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನ ಸುರಂಗ ರಸ್ತೆಗೆ ತೀವ್ರ ವಿರೋಧ ವ್ಯಕ್ತಪಡಿಸಿದ್ದ ಸಂಸದ ತೇಜಸ್ವಿ ಸೂರ್ಯ ಇಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಭೇಟಿಯಾಗಿದ್ದಾರೆ. ಈ ಸಂದರ್ಭದಲ್ಲಿ ಸುರಂಗ ರಸ್ತೆಯ ಸಾಧಕ-ಬಾಧಕಗಳು ಹಾಗೂ ಬೆಂಗಳೂರು ಸಂಚಾರ ದಟ್ಟಣೆ ನಿವಾರಣೆ ಮಾರ್ಗೋಪಾಯಗಳ ಬಗ್ಗೆ ಸಮಾಲೋಚನೆ ನಡೆಸಿದರು. ಈಗಾಗಲೇ ಸುರಂಗ ರಸ್ತೆ ನಿರ್ಮಾಣದ ವಿರುದ್ಧ ಸಂಸದ ತೇಜಸ್ವಿ ಸೂರ್ಯ ಅವರು, ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಈ ನಡುವೆ ಉಪಮುಖ್ಯಮಂತ್ರಿಯವರನ್ನು ಭೇಟಿಯಾಗಿ ಸುದೀರ್ಘ ಚರ್ಚೆ ನಡೆಸಿದ್ದಾರೆ.

<><><><>

ಕಳೆದ ೪ ವರ್ಷಗಳ ಅವಧಿಯಲ್ಲಿ ರಾಜ್ಯ ಸರ್ಕಾರ ಸ್ಥಳೀಯ ಸಂಸ್ಥೆಗಳಿಂದ ಸುಮಾರು ೭ ಸಾವಿರದ ೯೩ ಕೋಟಿ ರೂಪಾಯಿ ಸೆಸ್ ಸಂಗ್ರಹ ಮಾಡಿದೆ. ಆದರೂ ರಸ್ತೆಗಳಲ್ಲಿ ಮಕ್ಕಳ ಭಿಕ್ಷಾಟನೆ ಮುಂದುವರೆದಿದೆ ಎಂದು ಉಚ್ಚನ್ಯಾಯಾಲಯ ಕಳವಳ ವ್ಯಕ್ತಪಡಿಸಿದೆ. ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ಪೀಠ ಸರ್ಕಾರದ ಕಾರ್ಯ ವೈಖರಿಗೆ ಅತೃಪ್ತಿ ವ್ಯಕ್ತಪಡಿಸಿದೆ. ಈಗಾಗಲೇ ಎಷ್ಟು ಸೆಸ್ ಸಂಗ್ರಹ ಮಾಡಲಾಗಿದೆ ಹಾಗೂ ಎಷ್ಟು ಖರ್ಚು ಮಾಡಲಾಗಿದೆ ಎಂಬ ಕುರಿತಂತೆ ಹಣದ ಲೆಕ್ಕ ನೀಡುವಂತೆ ಸೂಚಿಸಿದೆ.

<><><><>

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು ಸಹಾಯವಾಗುತ್ತಿದ್ದು, ವಿಶ್ವ ಮಟ್ಟದಲ್ಲಿ ಈ ಯೋಜನೆಗಳು ದಾಖಲೆಯನ್ನೂ ನಿರ್ಮಿಸಿವೆ ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ಹೇಳಿದ್ದಾರೆ. ಗ್ಯಾರಂಟಿ ಯೋಜನೆಗಳು ಅನುಷ್ಠಾನ ಪ್ರಾಧಿಕಾರದ ನೂತನ ಜಿಲ್ಲಾ ಅಧ್ಯಕ್ಷರಾಗಿ ಅನಿಲಕುಮಾರ ದಡ್ಡಿ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಯೋಜನೆಗಳಿಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಪ್ರತಿ ತಿಂಗಳು ೧೨೧ ಕೋಟಿ ರೂಪಾಯಿ ಮೊತ್ತದ ಹಣ ಯೋಜನೆಗಳಿಗೆ ಬಳಕೆಯಾಗುತ್ತಿದೆ. ಗ್ರಾಮೀಣ ಮಟ್ಟದಲ್ಲಿ ಯೋಜನೆಗಳ ಅನುಷ್ಠಾನ ಮತ್ತು ಅವುಗಳಿಂದ ದೊರೆಯುವ ಉಪಯೋಗಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಜವಾಬ್ದಾರಿ ನೂತನ ಅಧ್ಯಕ್ಷರ ಮೇಲಿದೆ ಎಂದು ಅವರು ತಿಳಿಸಿದ್ದಾರೆ.

<><><><>

ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಮತ್ತು ಸಂಬಧಿಸಿದವರ ವಿರುದ್ಧ  ಪ್ರಕರಣ ದಾಖಲಿಸಬೇಕೆಂದು ದಾವಣಗೆರೆ ಜಿಲ್ಲಾಧಿಕಾರಿ ಡಾ. ಗಂಗಾಧರಸ್ವಾಮಿ. ಸೂಚಿಸಿದ್ದಾರೆ. ವಿವಿಧ ಇಲಾಖೆಗಳೊಂದಿಗೆ ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ತಡೆ ಕುರಿತು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಧ್ಯವರ್ತಿಗಳು ಹಣದ ಆಮಿ?ವೊಡ್ಡಿ ಬಡವರಿಂದ ಅಕ್ಕಿ ಖರೀದಿಸುತ್ತಿದ್ದು, ನ್ಯಾಮತಿ  ತಾಲ್ಲೂಕಿನಲ್ಲಿ ಅತಿ ಹೆಚ್ಚಾಗಿ ನ್ಯಾಯಬೆಲೆ ಅಂಗಡಿಗಳಿಂದ ಅಕ್ಕಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಕಂಡು ಬಂದಿದೆ.  ಈ ಹಿನ್ನೆಲೆಯಲ್ಲಿ ನಗರದ ಪ್ರಮುಖ ಪ್ರದೇಶಗಳಲ್ಲಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಬೇಕು ಎಂದು ತಿಳಿಸಿದ್ದಾರೆ. ಸಾರ್ವಜನಿಕರು ನ್ಯಾಯಬೆಲೆ ಅಂಗಡಿ ಅಥವಾ ಇನ್ನಾವುದೇ ಪ್ರದೇಶಗಳಲ್ಲಿ ಅನ್ನಭಾಗ್ಯ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಕಂಡುಬಂದರೆ ಕೂಡಲೇ ೧೧೨ ಸಂಖ್ಯೆಗೆ ಕರೆಮಾಡಬಹುದು ಎಂದು ಹೇಳಿದ್ದಾರೆ.

<><><><>

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ಅರ್ಹತಾ ದಿನಾಂಕ ನವೆಂಬರ್ ೧ಕ್ಕೆ ಅನ್ವಯ ಆಗುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದೆ. ಅರ್ಹ ಮತದಾರರ ನೋಂದಣಿ ಕಾರ್ಯ ಇನ್ನಷ್ಟು ಚುರುಕುಗೊಳಿಸಬೇಕು ಎಂದು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರೂ ಆಗಿರುವ ಕ್ಷೇತ್ರದ ಚುನಾವಣಾಧಿಕಾರಿ ಜಹೀರಾ ನಸೀಮ್ ತಿಳಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾತನಾಡಿದ ಅವರು, ನವೆಂಬರ್ ೬ರ ಒಳಗೆ ಪ್ರತಿ ಅರ್ಹ ಮತದಾರ ನೋಂದಣಿ ಆಗುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದ್ದಾರೆ. ಅರ್ಹ ಮತದಾರರು ನಿರಂತರ ಮೂರು ವರ್ಷ ಸೇವೆ ಹಾಗೂ ಪೂರ್ಣಾವಧಿ ಶಿಕ್ಷಕರಾಗಿರಬೇಕು. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ ೧೯ ಅನ್ನು ಭರ್ತಿ ಮಾಡಿ ಶೈಕ್ಷಣಿಕ ಸಂಸ್ಥೆಗಳಲ್ಲಿ ನವಂಬರ್ ೧ಕ್ಕೆ ಆರು ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ ಮೂರು ವರ್ಷ ಬೋಧನಾ ವೃತ್ತಿಯಲ್ಲಿ ನಿರತರಾಗಿರಬೇಕು. ಈ ಬಗ್ಗೆ ಆಯಾ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ-೨ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು. ಆಯಾ ಪ್ರಾಂಶುಪಾಲರಿಂದ ದೃಢೀಕರಣ ಪತ್ರ ಸಲ್ಲಿಸಬೇಕು ಎಂದು ಹೇಳಿದರು.

<><><>

ಕೋಲಾರ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ಶೇಕಡ ೧೦೦ರಷ್ಟು ತೆರಿಗೆ ಸಂಗ್ರಹ ಗುರಿ ಹೊಂದಲಾಗಿದ್ದು, ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಪ್ರವೀಣ್ ಪಿ. ಬಾಗೇವಾಡಿ ತಿಳಿಸಿದ್ದಾರೆ. ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ “ತೆರಿಗೆ ಪಾವತಿಸಿ ನಿಮ್ಮ ಜವಾಬ್ದಾರಿ ಚಲಾಯಿಸಿ” ಎಂಬ ಘೋಷವಾಕ್ಯದೊಂದಿಗೆ ತೆರಿಗೆ ಬಾಕಿ ಸಂಗ್ರಹಕ್ಕೆ ನವೆಂಬರ್ ೧೪ರವರೆಗೆ ವಿಶೇಷ ಅಭಿಯಾನ ಹಮ್ಮಿಕೊಂಡಿದ್ದು, ಜಿಲ್ಲೆಯ ೧೫೪ ಗ್ರಾಮ ಪಂಚಾಯಿತಿಗಳ ಜನರಿಗೆ ಮೂಲಭೂತ ಸೌಕರ್ಯ ಒದಗಿಸುವಲ್ಲಿ ತೆರಿಗೆ ಪಾವತಿ ಪ್ರಮುಖ ಪಾತ್ರವಹಿಸುತ್ತದೆ.

<><><>

ಹುಬ್ಬಳ್ಳಿಯ ದೇಶಪಾಂಡೆ ನಗರದಲ್ಲಿರುವ ನ್ಯೂ ಎಜ್ಯುಕೇಶನ್ ಸೊಸೈಟಿಯ ಜ್ಞಾನಭಾರತಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪ್ರಸಕ್ತ ಸಾಲಿನಿಂದ ಸಿಬಿಎಸ್‌ಸಿ ಮಾದರಿಯ ಶಿಕ್ಷಣ ಪ್ರಾರಂಭಿಸಲಾಗಿದೆ ಎಂದು ರಾಜ್ಯಸಭಾ ಸದಸ್ಯೆ, ಸೊಸೈಟಿ ಅಧ್ಯಕ್ಷೆ ಸುಧಾ ಮೂರ್ತಿ ಹೇಳಿದ್ದಾರೆ. ಶಾಲೆಯ

ಪುನರುಜ್ಜೀವನಗೊಳಿಸಲು ನಿರ್ಧರಿಸಿ ಸುಮಾರು ೪ ಕೋಟಿ ವೆಚ್ಚದಲ್ಲಿ ಶಾಲೆ ನವೀಕರಣಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ನನ್ನ ತಾಯಿ, ನಾನು ಹಾಗೂ ನನ್ನ ಸಹೋದರಿ ಇದೇ ಶಾಲೆಯಲ್ಲಿ ಕಲಿತಿದ್ದು, ಹಾಗಾಗಿ ಈ ಶಾಲೆಯೊಂದಿಗೆ ಅವಿನಾಭಾವ ಸಂಬಂಧವಿದೆ ಎಂದು ಹೇಳಿದ್ದಾರೆ.

**ಧ್ವನಿ : ರಾಜ್ಯಸಭಾ ಸದಸ್ಯೆ, ಸೊಸೈಟಿ ಅಧ್ಯಕ್ಷೆ ಸುಧಾ ಮೂರ್ತಿ (೨೦ ಸೆಕೆಂಡ್‌ಗಳು)**

<><><><>

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಇಂದಿನಿಂದ ಸೋಯಾಬಿನ್, ಸೂರ್ಯಕಾಂತಿ, ಹೆಸರುಕಾಳು ಖರೀದಿ ಆರಂಭವಾಗಲಿದೆ ಎಂದು ಕೃಷಿ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಸೋಯಾಬಿನ್ ಖರೀದಿಗೆ ೧೦೬ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಒಟ್ಟು ೭೯ ಸಾವಿರದ ೨೧೫ ಜನ ರೈತರು ತಮ್ಮ ಹೆಸರು ನೋಂದಾಯಿಸಿದ್ದಾರೆ. ಹೆಸರುಕಾಳು ಖರೀದಿಗೆ ೧೭೭ ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದೆ.

<><><><>

ಮೋಂಥಾ ಚಂಡಮಾರುತದ ಪ್ರಭಾವದಿಂದ ಕರಾವಳಿ ಜಿಲ್ಲೆಗಳಲ್ಲಿ ಇಂದು ವ್ಯಾಪಕ ಮಳೆಯಾಗಲಿದೆ. ಮೀನುಗಾರರು ಸಮುದ್ರಕ್ಕಿಳಿಯದಂತೆ ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲೂ ಇಂದು ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲೂ ಮೋಡ ಕವಿದ ವಾತವರಣವಿದ್ದು ಹಗುರದಿಂದ ಸಾಧಾರಣ ಮಳೆಯಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>